# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ಕೇಂದ್ರ ಪುರಸ್ಕೃತ ಮೀನುಗಾರರ ಉಳಿತಾಯ ಮತ್ತು ಪರಿಹಾರ ಯೋಜನೆಯಡಿ 2010-11ನೇ ಸಾಲಿನ ಕೇಂದ್ರ ಮತ್ತು ರಾಜ್ಯದ ಪಾಲಿನ ಅನುದಾನ ಬಿಡುಗಡೆ.

ಓದಲಾಗಿದೆ:- 1) ಆದೇಶ ಸಂಖ್ಯೆ:ಪಸಂಮೀ/65/ಮೀಇಯೋ/2010 ದಿನಾಂಕ:08-04-2010.
2) ಪತ್ರ ಸಂಖ್ಯೆ:12012/12/2009 FY(WU) ದಿನಾಂಕ:31-08-2010.
3) ಜಮಾ ದೃಢೀಕರಣ ಪತ್ರ ಸಂಖ್ಯೆ:ಎಫ್‌ಡಿ/13/ಬಿಜಿಎಲ್/2010 ದಿನಾಂಕ:08-09-2010.
4) ಪತ್ರ ಸಂಖ್ಯೆ:ಎಫ್‌ಸಿಎಸ್/7/2010-11 ದಿನಾಂಕ:27-09-2010.

******

## ಪ್ರಸ್ತಾವನೆ:

ಮೇಲೆ ಕ್ರಮಾಂಕ (1)ರಲ್ಲಿ ಓದಲಾದ ಆದೇಶದಲ್ಲಿ ಕೇಂದ್ರ ಪುರಸ್ಕೃತ ಯೋಜನೆಯಡಿ ಕರಾವಳಿ ಮೀನುಗಾರರಿಗೆ ಉಳಿತಾಯ ಮತ್ತು ಪರಿಹಾರ ಯೋಜನೆಯನ್ನು 2010-11ನೇ ಸಾಲಿಗೆ ಮುಂದುವರಿಸಿ ಆಡಳಿತಾತ್ಮಕ ಮಂಜೂರಾತಿ ನೀಡಲಾಗಿದೆ.

ಮೇಲೆ ಕ್ರಮಾಂಕ (2)ರಲ್ಲಿ ಓದಲಾದ ಪತ್ರದಲ್ಲಿ ಭಾರತ ಸರ್ಕಾರ ಸದರಿ ಯೋಜನೆಯಡಿ ಕರಾವಳಿ ಮೀನುಗಾರರಿಗೆ ಉಳಿತಾಯ ಮತ್ತು ಪರಿಹಾರ ಯೋಜನೆಯ ಅನುಷ್ಠಾನಕ್ಕಾಗಿ 2010-11ನೇ ಸಾಲಿನಲ್ಲಿ ಕೇಂದ್ರದ ಪಾಲಿನ ಅನುದಾನ ರೂ.1,25,85,201-00ಗಳನ್ನು ರಾಜ್ಯ ಸರ್ಕಾರಕ್ಕೆ ಬಿಡುಗಡೆ ಮಾಡಿದೆ.

ಮೇಲೆ ಓದಲಾದ ಕ್ರಮಾಂಕ (3)ರಲ್ಲಿ ಕೇಂದ್ರ ಸರ್ಕಾರದಿಂದ ಬಿಡುಗಡೆಯಾದ ರೂ.125.85 ಲಕ್ಷಗಳನ್ನು ರಾಜ್ಯ ಸರ್ಕಾರದ ಬೊಕ್ಕಸಕ್ಕೆ ಜಮೆ ಆಗಿರುವ ಬಗ್ಗೆ ಆರ್ಥಿಕ ಇಲಾಖೆಯು ದೃಢೀಕರಿಸಿದೆ.

ಮೇಲೆ ಕ್ರಮಾಂಕ (4)ರಲ್ಲಿ ಓದಲಾದ ಮೀನುಗಾರಿಕೆ ನಿರ್ದೇಶಕರ ಪತ್ರದಲ್ಲಿ, ಸದರಿ ಯೋಜನೆಯಡಿ ಕರಾವಳಿ ಮೀನುಗಾರರಿಂದ ಉಳಿತಾಯ ರೂಪದಲ್ಲಿ ಪ್ರತಿ ವರ್ಷದ ಸೆಪ್ಟೆಂಬರ್ ಮಾಹೆಯಿಂದ ಏಪ್ರಿಲ್ ಮಾಹೆಯವರೆಗೆ 8 ತಿಂಗಳಿಗೆ ಪ್ರತಿ ಫಲಾನುಭವಿಯಿಂದ ಮಾಸಿಕ ರೂ.75-00ರ ಕಂತಿನಂತೆ ಸಂಗ್ರಹಿಸಿದ ಮೊತ್ತಕ್ಕೆ ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಸಮಾನಾಂತರವಾಗಿ ನೀಡಿದ ವಂತಿಗೆ ಮೊತ್ತವನ್ನು ಕರಾವಳಿಯಲ್ಲಿ ಮೀನುಗಾರಿಕೆಯನ್ನು ನಿರ್ಬಂಧಿಸಿದ ಜೂನ್, ಜುಲೈ ಮತ್ತು ಆಗಸ್ಟ್ ತಿಂಗಳುಗಳಲ್ಲಿ ಮೀನುಗಾರರ ಜೀವನ ನಿರ್ವಹಣೆಗಾಗಿ ಫಲಾನುಭವಿಗಳಿಗೆ ನೀಡುವುದು ಈ ಕಾರ್ಯಕ್ರಮದ ಉದ್ದೇಶವಾಗಿದ್ದು, 2009-10ನೇ ಸಾಲಿನಲ್ಲಿ ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಯ 13,987 ಮತ್ತು ಉತ್ತರ ಕನ್ನಡ ಜಿಲ್ಲೆಯ 7,079 ಒಟ್ಟು 21,066 ಮೀನುಗಾರ ಫಲಾನುಭವಿಗಳಿಂದ ಸಂಗ್ರಹವಾಗಿರುವ ಒಟ್ಟು ರೂ.1,26,39,600-00 ಗಳಿಗೆ ಪೂರಕವಾಗಿ ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಸಮಾನಾಂತರವಾಗಿ ಒಟ್ಟು ರೂ.2,52,79,200-00ಗಳನ್ನು ನೀಡಬೇಕಾಗಿರುತ್ತದೆ.

ಸದರಿ ಯೋಜನೆಯಡಿ 2007-08ನೇ ಸಾಲಿನಲ್ಲಿ ಕರಾವಳಿ ಜಿಲ್ಲೆಗಳ 17,372 ಮೀನುಗಾರ ಫಲಾನುಭವಿಗಳಿಂದ ರೂ.1,03,14,400-00ಗಳು ಸಂಗ್ರಹವಾಗಿದ್ದು, ಇದಕ್ಕೆ ಪೂರಕವಾಗಿ ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ತಲಾ ರೂ.51,57,201-00ರಂತೆ ಒಟ್ಟು ರೂ.1,03,14,400-00 ಗಳನ್ನು ನೀಡಬೇಕಾಗಿದ್ದು, ಕೇಂದ್ರ ಸರ್ಕಾರವು ರೂ.54,399-00ಗಳನ್ನು ಹೆಚ್ಚುವರಿ ಸೇರಿಸಿ ಒಟ್ಟು ರೂ.52,11,600-00ಗಳನ್ನು ಬಿಡುಗಡೆ ಮಾಡಿರುತ್ತದೆ. ಕೇಂದ್ರ ಸರ್ಕಾರವು ಬಿಡುಗಡೆಗೊಳಿಸಿದ ಪೂರ್ಣ ಮೊತ್ತವನ್ನು ಬಿಡುಗಡೆ ಮಾಡಿ ರಾಜ್ಯದ ಪಾಲು ರೂ.51,02,800-00ಗಳನ್ನು ಮಾತ್ರ ಬಿಡುಗಡೆ ಮಾಡಲಾಗಿರುತ್ತದೆ.

ಹೆಚ್ಚುವರಿಯಾಗಿ ಬಿಡುಗಡೆ ಮಾಡಿದ ರೂ.54,399-00ಗಳನ್ನು ಉಪಯೋಗಿಸಿಕೊಳ್ಳದೇ ಇರುವುದನ್ನು ಕೇಂದ್ರ ಸರ್ಕಾರವು ಗಮನಿಸಿ 2010-11ನೇ ಸಾಲಿಗೆ ಕೇಂದ್ರದ ಪಾಲು ರೂ.1,26,39,600-00ಗಳನ್ನು ಫಲಾನುಭವಿಗೆ ನೀಡಲು ಮಂಜೂರಾತಿ ನೀಡಿ, ರೂ.54,399-00 ಗಳನ್ನು ಕಡಿಮೆ ಮಾಡಿ ರೂ.1,25,85,201-00ಗಳನ್ನು ಬಿಡುಗಡೆ ಮಾಡಿರುತ್ತದೆ. ಹಾಗೂ ರೂ.54,399-00ಗಳನ್ನು ಪುನರ್‌ಮೌಲ್ಯೀಕರಣಗೊಳಿಸಿರುತ್ತದೆ.

ಸದರಿ ಯೋಜನೆಯ ಅನುಷ್ಠಾನಕ್ಕಾಗಿ ಕೇಂದ್ರ ಹಾಗೂ ರಾಜ್ಯದ ಪಾಲು ಒಟ್ಟಾರೆ ರೂ.2,52,79,200-00ಗಳು ಅವಶ್ಯವಿರುತ್ತದೆ. 2010-11ನೇ ಸಾಲಿನ ಆಯವ್ಯಯದಲ್ಲಿ ಈ ಯೋಜನೆಗಾಗಿ ಲೆಕ್ಕ ಶೀರ್ಷಿಕೆ 2405-00-120-0-07-100 ರಲ್ಲಿ ಕೇಂದ್ರದ ಪಾಲು ರೂ.111.00 ಲಕ್ಷ ಹಾಗೂ ರಾಜ್ಯದ ಪಾಲು ರೂ.111.00 ಲಕ್ಷ ಹೀಗೆ ಒಟ್ಟು ರೂ.222.00 ಲಕ್ಷಗಳ ಅನುದಾನವನ್ನು ಒದಗಿಸಲಾಗಿದ್ದು, ಸದರಿ ಅನುದಾನವನ್ನು ಮೊದಲನೇ ಕಂತಾಗಿ ಬಿಡುಗಡೆಗೊಳಿಸಲು ಕೋರಿರುತ್ತಾರೆ.

ಮೀನುಗಾರಿಕೆ ನಿರ್ದೇಶಕರ ಪ್ರಸ್ತಾವನೆಯನ್ನು ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಿದೆ.

**<u>ಆದೇಶ ಸಂಖ್ಯೆ:ಪಸಂಮೀ/57/ಮೀಇಯೋ/2010, ಬೆಂಗಳೂರು ದಿನಾಂಕ:11-11-2010</u>**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನಲೆಯಲ್ಲಿ, ಕೇಂದ್ರ ಪುರಸ್ಕೃತ ಮೀನುಗಾರರ ಉಳಿತಾಯ ಮತ್ತು ಪರಿಹಾರ ಯೋಜನೆಯನ್ನು ಅನುಷ್ಠಾನಗೊಳಿಸಲು 2010-11ನೇ ಸಾಲಿನ ಕೇಂದ್ರದ ಪಾಲಿನ ಮೊತ್ತ ರೂ.111.00 ಲಕ್ಷ (ಒಂದು ನೂರ ಹನ್ನೊಂದು ಲಕ್ಷ ರೂಪಾಯಿಗಳು ಮಾತ್ರ)ಗಳ ಮೊತ್ತಕ್ಕೆ ರಾಜ್ಯದ ಪಾಲಿನ ಅನುದಾನ ರೂ.111.00 ಲಕ್ಷ (ಒಂದು ನೂರ ಹನ್ನೊಂದು ಲಕ್ಷ ರೂಪಾಯಿಗಳು ಮಾತ್ರ)ಗಳನ್ನು ಸೇರಿಸಿ ಒಟ್ಟು ರೂ.222.00 (ಎರಡು ನೂರ ಇಪ್ಪತ್ತೆರಡು ಲಕ್ಷ ರೂಪಾಯಿಗಳು ಮಾತ್ರ)ಗಳನ್ನು ಬಿಡುಗಡೆಗೊಳಿಸಿ ಆದೇಶಿಸಿದೆ.

ಸದರಿ ವೆಚ್ಚವನ್ನು ಲೆಕ್ಕ ಶೀರ್ಷಿಕೆ "2405-ಮೀನುಗಾರಿಕೆ-00-120-ಮೀನುಗಾರಿಕೆ ಸಹಕಾರಿ ಸಂಸ್ಥೆಗಳು-0-07-ಮೀನುಗಾರರ ಕಲ್ಯಾಣ ಯೋಜನೆ ಉಪಶೀರ್ಷಿಕೆ 100 ಧನ ಸಹಾಯ (ಯೋಜನೆ)" ಅಡಿಯಲ್ಲಿ 2010-11ನೇ ಸಾಲಿನಲ್ಲಿ ಒದಗಿಸಲಾದ ಅನುದಾನದಿಂದ ಭರಿಸತಕ್ಕದ್ದು.

ಸದರಿ ಮೊತ್ತವನ್ನು ಮೀನುಗಾರಿಕೆ ನಿರ್ದೇಶಕರು, ಬೆಂಗಳೂರುರವರು ಸ್ವೀಕೃತನ ರಸೀದಿ ಮೂಲಕ ರಾಜ್ಯ ಹುಜೂರ್ ಖಜಾನೆಯಿಂದ ನಗದೀಕರಿಸಿ ಮೀನುಗಾರಿಕೆ ಉಪ ನಿರ್ದೇಶಕರು, ಮಂಗಳೂರು ಮತ್ತು ಕಾರವಾರ ಇವರುಗಳಿಗೆ ಸದರಿ ಯೋಜನೆಯ ಅನುಷ್ಠಾನಕ್ಕಾಗಿ ವಿತರಿಸಲು ಅನುಮತಿ ನೀಡಲಾಗಿದೆ.

ಈ ಆದೇಶವನ್ನು ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ:ಎಫ್‌ಡಿ/09/ಟಿಎಫ್‌ಪಿ/2004 ದಿನಾಂಕ:17-08-2004 ರಲ್ಲಿ ಇಲಾಖಾ ಪ್ರಧಾನ ಕಾರ್ಯದರ್ಶಿಗಳಿಗೆ ನೀಡಿರುವ ವಿತ್ತಾಧಿಕಾರದನ್ವಯ ಹೊರಡಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಡಿ.ಎಂ.ರಾಜಣ್ಣ)
ಸರ್ಕಾರದ ಅಧೀನ ಕಾರ್ಯದರ್ಶಿ
ಪಶುಸಂಗೋಪನೆ ಮತ್ತು ಮೀನುಗಾರಿಕೆ ಇಲಾಖೆ(ಮೀ)

ಇವರಿಗೆ:

1. ಮಹಾಲೇಖಪಾಲರು (ಎ ಮತ್ತು ಇ)(ಎಯು-1)(ಎಯು-2), ಕರ್ನಾಟಕ, ಬೆಂಗಳೂರು.
2. ಮೀನುಗಾರಿಕೆ ನಿರ್ದೇಶಕರು, ಬೆಂಗಳೂರು.
3. ಮೀನುಗಾರಿಕೆ ಉಪ ನಿರ್ದೇಶಕರು, ಮಂಗಳೂರು/ಕಾರವಾರ.
4. ಜಂಟಿ ನಿರ್ದೇಶಕರು, ಖಜಾನೆ ಗಣಕಜಾಲ ನಿರ್ವಹಣಾ ಕೇಂದ್ರ, ಖನಿಜ ಭವನ, ರೇಸ್‌ಕೋರ್ಸ್ ರಸ್ತೆ, ಬೆಂಗಳೂರು.
5. ಆಂತರಿಕ ಆರ್ಥಿಕ ಸಲಹೆಗಾರರು, ಕೃ.ತೋ. ಮತ್ತು ಪ.ಸಂ.ಮೀ. ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
6. ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ-4).
7. ಖಜಾನಾಧಿಕಾರಿ, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
8. ಶಾಖಾ ರಕ್ಷಾ ಕಡತ/ಹೆಚ್ಚಿನ ಪ್ರತಿಗಳು.